**SC No. 202/2021**
**PW-1**

**ದಿನಾಂಕ 07-11-2024 ರಂದು ಸಾಕ್ಷಿಯನ್ನು ಪುನಃ ಕರೆಯಿಸಲಾಯಿತು ಮತ್ತು ಪ್ರಮಾಣೀಕರಿಸಲಾಯಿತು.**

**ಪಾಟೀಸವಾಲುಃ ಆರೋಪಿತರ ಪರ ಶ್ರೀ ಆರ್ ಎಸ್ ಎಂ ವಕೀಲರಿಂದಃ**

ಚಾಸಾ-2 ನನ್ನ ತಮ್ಮ ಎಂದರೆ ಸರಿ. ನನಗೆ ಓದಲು ಬರೆಯಲು ಬರುವುದಿಲ್ಲ. ದೂರನ್ನು ಯಾರು ಬರೆದರು ನನಗೆ ಗೊತ್ತಿಲ್ಲ ಎಂದರೆ ಸರಿ. ದೂರಿನಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿ. ಈ ಪ್ರಕರಣಕ್ಕೆ ಸಂಬಂಧಸಿದ ಹಾಗೆ 5-6 ಸಹಿಗಳನ್ನು ಪೊಲೀಸರ ಮುಂದೆ ಹಾಕಿದ್ದೇನೆ. ಯಾವ ಯಾವ ದಾಖಲೆಗಳಿಗೆ ಸಹಿ ಮಾಡಿದ್ದೇನೆ ಎಂದು ನನಗೆ ಹೇಳಲು ಆಗುವುದಿಲ್ಲ ಎಂದರೆ ಸರಿ. ಪಂಚನಾಮೆಗೆ ಬರಲು ನೋಟೀಸ್ ನೀಡಿರಲಿಲ್ಲ ಎಂದರೆ ಸರಿ. ಪಂಚನಾಮೆಯಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿ. ಪಂಚನಾಮೆ ಬರೆದ ಸ್ಥಳದ ಚೆಕ್ಕುಬಂದಿ ಹೇಳಲು ಬರುವುದಿಲ್ಲ ಎಂದರೆ ಸರಿ. ಪೊಲೀಸರ ಕೋರಿಕೆಯ ಮೇರೆಗೆ ಪಂಚನಾಮೆಗೆ ಸಹಿ ಮಾಡಿದ್ದೇನೆ ಎಂದರೆ ಸರಿ. ಪಂಚನಾಮೆಗೆ ನಾನು ಪೊಲೀಸ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಮುಮಾಗಳನ್ನು ಇದೇ ಮಾದಲಬಾರಿಗೆ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ ಎಂದರೆ ಸರಿ . ಜಯಣ್ಣನ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.